**All India Radio: Bangalore**

**Regional Bulletin In Kannada**

**10.02.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

- ಸಿಲಿಕಾನ್ ವ್ಯಾಲಿ ಬೆಂಗಳೂರು ಬಾಹ್ಯಾಕಾಶ ಕ್ಷೇತ್ರದಲ್ಲಿಯೂ ನಿರ್ಣಾಯಕ ಪಾತ್ರ- ರಕ್ಷಣಾ ಸಚಿವ ರಾಜನಾಥ್ ಸಿಂಗ್ ಬಣ್ಣನೆ
- ಬೆಂಗಳೂರಿನ ಅರಮನೆ ಮೈದಾನದಲ್ಲಿ ನಾಳೆ ಜಾಗತಿಕ ಹೂಡಿಕೆದಾರರ ಸಮಾವೇಶ
- ಕೊಪ್ಪಳದಲ್ಲಿ ಬಲ್ಡೋಟಾ ಸಂಸ್ಥೆಯಿಂದ ಉಕ್ಕಿನ ಕಾರ್ಖಾನೆ ಸ್ಥಾಪನೆ; ನಾಳೆ ಮುಖ್ಯಮಂತ್ರಿ ಸಮ್ಮುಖದಲ್ಲಿ ಒಪ್ಪಂದಕ್ಕೆ ಸಹಿ
- ಸಣ್ಣ ಹಣಕಾಸು ಸಂಸ್ಥೆಗಳ ಕುರಿತ ಸುಗ್ರಿವಾಜ್ಞೆ ರಾಜ್ಯಪಾಲರಿಗೆ ಮರು ರವಾನಿಸಿದ ಸರ್ಕಾರ
- ಮುಡಾ ಪ್ರಕರಣ; ಮುಖ್ಯಮಂತ್ರಿ ಪತ್ನಿಗೆ 'ಇಡಿ' ನೀಡಿದ್ದ ಸಮನ್ಸ್‌ಗೆ ಹೈಕೋರ್ಟ್ ಧಾರವಾಡ ಪೀಠ ತಡೆಯಾಜ್ಞೆ

***************

ಭಾರತವು, ವೈಮಾನಿಕ ಕ್ಷೇತ್ರದ ಘಟಕಗಳು ಹಾಗೂ ರಕ್ಷಣಾ ಉತ್ಪಾದನೆಗೆ ಜಾಗತಿಕ ಕೇಂದ್ರವಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಏರೋ ಇಂಡಿಯಾ-೨೦೨೫ ಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ರಕ್ಷಣಾ ಸಂಶೋಧನೆಗಳು ಮತ್ತು ಅಭಿವೃದ್ಧಿ, ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕೆಗಳು, ವಿಜ್ಞಾನಿಗಳು, ಇಂಜಿನಿಯರ್‌ಗಳು ಭಾರತಕ್ಕೆ ಸ್ಪರ್ಧಾತ್ಮಕ ಗುರಿ ನೀಡುವುದಲ್ಲದೆ, ವಿಶ್ವಮಟ್ಟದಲ್ಲಿ ಭಾರತವನ್ನು ಮುನ್ನಡೆಸುತ್ತಿದ್ದಾರೆ ಎಂದು ಹೇಳಿದ್ದಾರೆ.

ಬೆಂಗಳೂರು ಬಾಹ್ಯಾಕಾಶ ಮತ್ತು ರಕ್ಷಣಾ ನಾವೀನ್ಯತೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆ. ಸಿಲಿಕಾನ್ ವ್ಯಾಲಿ ಎಂದು ಕರೆಯಲ್ಪಡುವ ಬೆಂಗಳೂರು ಬಾಹ್ಯಾಕಾಶ ಕ್ಷೇತ್ರದಲ್ಲಿಯೂ ಶಕ್ತಿಶಾಲಿಯಾಗಿ ಹೊರಹೊಮ್ಮುತ್ತಿದೆ ಎಂದು ಶ್ಲಾಘಿಸಿದ್ದಾರೆ.

ಯುದ್ಧ ವಿಮಾನಗಳು, ಹೆಲಿಕಾಪ್ಟರ್‌ಗಳು, ರೇಡಾರ್‌ಗಳು, ಡ್ರೋಣ್‌ಗಳು ಮತ್ತು ಎಲೆಕ್ಟ್ರಾನಿಕ್ ಯುದ್ಧ ವ್ಯವಸ್ಥೆಗಳನ್ನು ಉತ್ಪಾದಿಸುವಲ್ಲಿ ಬೆಂಗಳೂರು ನಿರ್ಣಾಯಕ ಪಾತ್ರ ವಹಿಸುತ್ತಿದೆ ಎಂದು ಬಣ್ಣಿಸಿದ್ದಾರೆ.

ಬಳಿಕ ಅವರು, ಜಾಗತಿಕ ನಿಯೋಜನೆ ಮೂಲಕ ಅಭಿವೃದ್ಧಿ ಸಾಕಾರ - ಎಡ್ಜ್ ದುಂಡು ಮೇಜಿನ ಸಭೆಯಲ್ಲಿ ಮಾತನಾಡಿ, ಈ ಸಭೆಯು ಸುಸ್ಥಿರ ಮತ್ತು ದೀರ್ಘ ಕಾಲಿನ ಪಾಲುದಾರಿಕೆಗಳನ್ನು ರೂಪಿಸಲು ಒಂದು ವಿಶಿಷ್ಠ ವೇದಿಕೆ ಒದಗಿಸುವ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಧ್ವನಿ: ರಾಜನಾಥ್ ಸಿಂಗ್, ರಕ್ಷಣಾ ಸಚಿವ

ಸುಮಾರು ೧೦೦ ಕ್ಕೂ ಹೆಚ್ಚು ವೈಮಾನಿಕ ಹಾಗೂ ರಕ್ಷಣಾ ಕ್ಷೇತ್ರದ ಉದ್ಯಮಿಗಳು ಈ ದುಂಡು ಮೇಜಿನ ಸಭೆಯಲ್ಲಿ ಭಾಗವಹಿಸಿದ್ದರು.

***************

ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್-ಎಚ್.ಎ.ಎಲ್, ನ ಪ್ರಮುಖ ಜೆಟ್ ತರಬೇತಿ ವಿಮಾನವಾದ ಎಚ್.ಜೆ.ಟಿ-೩೬ ಅನ್ನು 'ಯಶಸ್' ಎಂದು ಮರು ನಾಮಕರಣ ಮಾಡಲಾಗಿದೆ.

ಏರೋ ಇಂಡಿಯಾ-೨೦೨೫ರಲ್ಲಿ ಎಚ್‌ಎಎಲ್ ನ ಹಿರಿಯ ಅಧಿಕಾರಿಗಳ ಸಮ್ಮುಖದಲ್ಲಿ ರಕ್ಷಣಾ ಉತ್ಪಾದನಾ ಇಲಾಖೆ ಕಾರ್ಯದರ್ಶಿ ಸಂಜೀವ್ ಕುಮಾರ್ ನೂತನ ಹೆಸರನ್ನು ಅನಾವರಣಗಳಿಸಿದರು.

ಈ ವಿಮಾನವನ್ನು ಅತ್ಯಾಧುನಿಕ ಎವಿಯಾನಿಕ್ಸ್ ಮತ್ತು ಆಧುನಿಕ ಕಾಕ್‌ಪಿಟ್‌ನೊಂದಿಗೆ ನವೀಕರಿಸಲಾಗಿದೆ. ಯಶಸ್ ವಿಮಾನವು, ಪೈಲೆಟ್ ತರಬೇತಿ, ಶಸ್ತ್ರಾಸ್ತ್ರ ತರಬೇತಿ ಮತ್ತು ಯುದ್ಧದ ಸಂದರ್ಭವನ್ನು ಎದುರಿಸಲು ಸಮರ್ಥವಾಗಿದೆ. ಈ ವಿಮಾನದಲ್ಲೂ ೧ ಸಾವಿರ ಕೆಜಿ ಶಸ್ತ್ರಾಸ್ತ್ರಗಳನ್ನು ಸಾಗಣೆ ಮಾಡಬಹುದಾಗಿದೆ.

ಏರೋ ಇಂಡಿಯಾ ವೈಮಾನಿಕ ಪ್ರದರ್ಶನ ಕುರಿತಂತೆ ನಮ್ಮ ಬಾತ್ಮೀದಾರರಾದ ಎಚ್.ಆರ್.ಸುಧೀಂದ್ರ ಹೆಚ್ಚಿನ ಮಾಹಿತಿ ನೀಡಿದ್ದಾರೆ.

ಧ್ವನಿ; ಸುಧೀಂದ್ರ ಎಚ್.ಆರ್

***************

ಬೆಂಗಳೂರಿನ ಅರಮನೆ ಮೈದಾನದಲ್ಲಿ ನಾಳೆ ಜಾಗತಿಕ ಹೂಡಿಕೆದಾರರ ಸಮಾವೇಶ ೨೦೨೫ ಕ್ಕೆ ಚಾಲನೆ ದೊರೆಯಲಿದೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಜಿಮ್ ಸಮಾವೇಶಕ್ಕೆ ಚಾಲನೆ ನೀಡಲಿದ್ದಾರೆ.

ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ, ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಸಮಾವೇಶದಲ್ಲಿ ಪಾಲ್ಗೊಳ್ಳಲಿದ್ದಾರೆ.

ಈ ಸಮಾವೇಶವು 'ಪ್ರಗತಿಯ ಮರು ಕಲ್ಪನೆ' ಎಂಬ ಘೋಷವಾಕ್ಯದೊಂದಿಗೆ ನಾಳೆಯಿಂದ ನಾಲ್ಕು ದಿನಗಳ ಕಾಲ ನಡೆಯಲಿದೆ. ಸಮಾವೇಶದ ಹಿನ್ನೆಲೆಯಲ್ಲಿ ಬೆಂಗಳೂರಿನ ಅರಮನೆ ಮೈದಾನದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಇಂದು ಪರಿಶೀಲನೆ ನಡೆಸಿದರು.

***************

ದೇಶದ ಪ್ರತಿಷ್ಠಿತ ಸಂಸ್ಥೆಗಳಲ್ಲಿ ಒಂದಾಗಿರುವ ಬಲ್ಡೋಟಾ ಉಕ್ಕು ಸಮೂಹ ಸಂಸ್ಥೆ ಈಗ ಕರ್ನಾಟಕದಲ್ಲಿ ಅತಿ ದೊಡ್ಡ ಉಕ್ಕು ಕಾರ್ಖಾನೆ ಸ್ಥಾಪಿಸುವ ಮೂಲಕ ವಿಶೇಷ ದಾಖಲೆ ಮಾಡಲು ಮುಂದಾಗಿದೆ.

ಕರ್ನಾಟಕದ ಕೊಪ್ಪಳ ಜಿಲ್ಲೆಯಲ್ಲಿ ಬಲ್ಡೋಟಾ ಸಮೂಹ ಸಂಸ್ಥೆಯು ೫೪ ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ೧೦.೫ ದಶ ಲಕ್ಷ ಟನ್ ಉತ್ಪಾದನೆ ಸಾಮರ್ಥ್ಯದ ಇಂಟೆಗ್ರೇಟೆಡ್ ಉಕ್ಕಿನ ಕಾರ್ಖಾನೆ ಸ್ಥಾಪನೆಗೆ ಮುಂದಾಗಿದೆ. ಈ ಮೂಲಕ ರಾಜ್ಯದಲ್ಲಿ ಹದಿನೈದು ಸಾವಿರಕ್ಕೂ ಹೆಚ್ಚು ಉದ್ಯೋಗ ಸೃಷ್ಟಿಯಾಗಲಿದೆ.

ನಾಳೆ ನಡೆಯಲಿರುವ ಜಿಮ್ ಸಮಾವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಮ್ಮುಖದಲ್ಲಿ ಬಲ್ಡೋಟಾ ಸಮೂಹ ಸಂಸ್ಥೆಯು ಒಪ್ಪಂದಕ್ಕೆ ಸಹಿ ಹಾಕಲಿದೆ.

ಬಲ್ಡೋಟಾ ಸಮೂಹ ಸಂಸ್ಥೆಯ ಜಂಟಿ ವ್ಯವಸ್ಥಾಪಕ ನಿರ್ದೇಶಕರಾದ ರಾಹುಲ್ ಕುಮಾರ್ ಬಲ್ಡೋಟಾ ತಿಳಿಸಿದ್ದಾರೆ.

ಬಲ್ಡೋಟಾ ಸಮೂಹ ಸಂಸ್ಥೆಯು ಖನಿಜಗಳ ಅನ್ವೇಷಣೆ, ಗಣಿಗಾರಿಕೆ, ಕೈಗಾರಿಕಾ ಅನಿಲ, ಪೆಲೆಟ್‌ಗಳ ಉತ್ಪಾದನೆ, ಪವನ ವಿದ್ಯುತ್, ನೌಕಾ, ಸಾರಿಗೆ, ತ್ಯಾಜ್ಯ ವಸ್ತುಗಳ ನಿರ್ವಹಣೆ ಕಬ್ಬಿಣದ ಅದಿರಿನ ಗಣಿಗಳನ್ನು ನಿರ್ವಹಿಸುವ ಮೂಲಕ ದೇಶದಲ್ಲಿ ಮುಂಚೂಣಿ ಸಂಸ್ಥೆಯಾಗಿದೆ.

***************

ಸಣ್ಣ ಹಣಕಾಸು ಸಂಸ್ಥೆಗಳು ಕುರಿತ ಸುಗ್ರಿವಾಜ್ಞೆಯನ್ನು ರಾಜ್ಯಪಾಲರು ಕೇಳಿದ ಸಮಗ್ರ ವಿವರಣೆಗಳೊಂದಿಗೆ ರಾಜ್ಯಪಾಲರಿಗೆ ಮರು ರವಾನಿಸಲಾಗಿದೆ.

ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು, ವ್ಯಕ್ತಪಡಿಸಿರುವ ಎಲ್ಲಾ ಆಕ್ಷೇಪಣೆಗಳಿಗೆ ಕಾನೂನು ಇಲಾಖೆ, ಸೂಕ್ತ ಸ್ಪಷ್ಟೀಕರಣಗಳನ್ನು ನೀಡಿದೆ.

ರಾಜ್ಯಪಾಲರು ಸರ್ಕಾರದ ಸುಗ್ರೀವಾಜ್ಞೆ ಸಹಜ ಹಾಗೂ ಸಾಲ ನೀಡುವವರ ಮೂಲಭೂತ ಹಕ್ಕುಗಳಿಗೆ ವಿರುದ್ಧವಾಗಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

***************

ಮುಡಾ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ನಿಗೆ ಜಾರಿ ನಿರ್ದೇಶನಾಲಯ ಜಾರಿ ಮಾಡಿದ್ದ ಸಮನ್ಸ್ ಆದೇಶಕ್ಕೆ ಉಚ್ಚ ನ್ಯಾಯಾಲಯದ ಧಾರವಾಡ ಪೀಠ ತಡೆಯಾಜ್ಞೆ ನೀಡಿದೆ.

ಇಂದು ವಿಚಾರಣೆ ನಡೆಸಿದ ಎಂ.ನಾಗಪ್ರಸನ್ನ ನೇತೃತ್ವದ ಪೀಠ, ಪಾರ್ವತಿ ಹಾಗೂ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಅವರಿಗೆ ತಡೆಯಾಜ್ಞೆ ವಿಸ್ತರಿಸಿ ಆದೇಶ ನೀಡಿದೆ. ನ್ಯಾಯಾಲಯ, ವಿಚಾರಣೆಯನ್ನು ಇದೇ ೨೦ಕ್ಕೆ ಮುಂದೂಡಿದೆ. ಮುಂದಿನ ಆದೇಶದವರೆಗೆ ತನಿಖೆ ಮುಂದುವರಿಸದಂತೆ ಇಡಿ ಗೆ ನಿರ್ದೇಶನ ನೀಡಿದೆ.

ಇನ್ನೊಂದೆಡೆ ಮುಡಾ ಪ್ರಕರಣ ಕುರಿತಂತೆ ಉಚ್ಚ ನ್ಯಾಯಾಲಯದ ಆದೇಶವನ್ನು ಸುಪ್ರೀಂಕೋರ್ಟ್‌ನಲ್ಲಿ ಪ್ರಶ್ನಿಸುವುದಿಲ್ಲ ಎಂದು ಅರ್ಜಿದಾರ ಸ್ನೇಹಮಹಿ ಕೃಷ್ಣ ತಿಳಿಸಿದ್ದಾರೆ.

***************

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಭೇಟಿ ವೇಳೆ ಯಾವುದೇ ರೀತಿಯ ರಾಜಕೀಯ ಚರ್ಚೆಗಳನ್ನು ಮಾಡಿಲ್ಲ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಖರ್ಗೆ ಅವರ ಕುಟುಂಬ ಮತ್ತು ತಮ್ಮ ಕುಟುಂಬ ಒಂದೇ ಆಗಿದ್ದು, ಭೇಟಿ ವೇಳೆ ಯಾವುದೇ ರಾಜಕೀಯ ಚರ್ಚೆಯನ್ನು ಮಾಡಿಲ್ಲ ಎಂದು ತಿಳಿಸಿದ್ದಾರೆ.

ಇದೇ ವೇಳೆ, ಜಾತಿಗಣತಿ ವರದಿ ಜಾರಿಗೆ ಯಾರು ಅಡ್ಡಿಪಡಿಸಿಲ್ಲ ಎಂದು ಅವರು ತಿಳಿಸಿದ್ದಾರೆ. ಮುಖ್ಯಮಂತ್ರಿಗಳು ಆರೋಗ್ಯದ ದೃಷ್ಟಿಯಿಂದ ಸಚಿವ ಸಂಪುಟ ಸಭೆ ಮುಂದೂಡಿದ್ದಾರೆ. ಇದೇ ೧೭ರಂದು ಮಲೆಮಹದೇಶ್ವರ ಬೆಟ್ಟದಲ್ಲಿ ಸಂಪುಟ ಸಭೆ ನಡೆಸಲು ನಿರ್ಧರಿಸಿದ್ದಾರೆ ಎಂದು ಡಾ.ಜಿ.ಪರಮೇಶ್ವರ್ ಮಾಹಿತಿ ನೀಡಿದ್ದಾರೆ.

***************

ಮೈಸೂರು ಜಿಲ್ಲೆಯ ಟಿ-ನರಸೀಪುರದಲ್ಲಿರುವ ತ್ರಿವೇಣಿ ಸಂಗಮದಲ್ಲಿ ಇಂದಿನಿಂದ ೩ ದಿನಗಳ ಕಾಲ ನಡೆಯುವ ೧೩ನೇ ಕುಂಭಮೇಳಕ್ಕೆ ಚಾಲನೆ ದೊರೆತಿದೆ.

ಕಪಿಲೆ, ಕಾವೇರಿ ಹಾಗೂ ಸ್ಪಟಿಕ ನದಿಗಳ ಸಂಗಮ ಸ್ಥಳವಾದ ನಡುಹೊಳೆ ಬಸಪ್ಪ ನದಿ ಮದ್ಯದಲ್ಲಿ ಧ್ವಜಾರೋಹಣ ಮಾಡುವ ಮೂಲಕ ಕುಂಭಮೇಳಕ್ಕೆ ವಿವಿಧ ಮಠಗಳ ಮಠಾಧೀಶರು ಚಾಲನೆ ನೀಡಿದರು.

ಮಾಘ ಮಾಸದ ಹಿನ್ನೆಲೆಯಲ್ಲಿ ಇಂದು ಬೆಳಗ್ಗೆಯಿಂದಲೇ ಭಕ್ತರು ಪುಣ್ಯ ಸ್ನಾನ ಮಾಡಿದರು.

***************

ಕೆಆರ್‌ಎಸ್ ಅಣೆಕಟ್ಟೆಯಿಂದ ೫೦೦ ಎಂಎಲ್‌ಡಿ ಕುಡಿಯುವ ನೀರು ಶಾಶ್ವತವಾಗಿ ಬೆಂಗಳೂರಿಗೆ ಕೊಂಡೊಯ್ಯುವ ಯೋಜನೆಯು ಮಂಡ್ಯ ಜಿಲ್ಲೆಯ ವಿ.ಸಿ ನಾಲಾ ವ್ಯಾಪ್ತಿಯ ಕೊನೆ ಭಾಗದ ರೈತರಿಗೆ ಮರಣ ಶಾಸನವಾಗಲಿದೆ ಎಂದು ಮಾಜಿ ಸಚಿವ ಡಿ.ಸಿ.ತಮ್ಮಣ್ಣ ಎಚ್ಚರಿಸಿದ್ದಾರೆ.

ಮಂಡ್ಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಯೋಜನೆ ಮೂಲಕ ಬೆಂಗಳೂರಿಗೆ ನೀರು ಕೊಂಡೊಯ್ಯಲು ೬ ಸಾವಿರದ ೯೩೯ ಕೋಟಿ ರೂಗಳ ಯೋಜನೆ ತಯಾರಿಸಿ ಭೂ ಸ್ವಾಧಿನಕ್ಕೂ ಆದೇಶ ಹೊರಡಿಸಲಾಗಿದೆ ಎಂದರು.

***************

ಹಲವು ಪೌಷ್ಠಿಕಾಂಶಗಳನ್ನು ಒಳಗೊಂಡಿರುವ ಸಿರಿಧಾನ್ಯಗಳು ರೋಗ ನಿರೋಧಕ ಶಕ್ತಿಯನ್ನೂ ಹೊಂದಿವೆ. ಬಡವರ ಆಹಾರವಾಗಿದ್ದ ಸಿರಿಧಾನ್ಯಗಳು ಇಂದು ಶ್ರೀಮಂತರ ಆಹಾರದ ಭಾಗವಾಗಿದೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ.

ಬಾಗೇಪಲ್ಲಿ ಪಟ್ಟಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕೃಷಿ ಮತ್ತು ತೋಟಗಾರಿಕೆ ಇಲಾಖೆ ಸಹಯೋಗದಲ್ಲಿ ಇಂದು ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಸಿರಿಧಾನ್ಯಗಳ ಮೇಳ ಮತ್ತು ಫಲಪುಷ್ಪ ಪ್ರದರ್ಶನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

********ಮುಕ್ತಾಯ*******